I/567944/2024

**ಕರ್ನಾಟಕ ಸರ್ಕಾರ**
**ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಹಾಗೂ ಆಯ್ಕೆ ಪ್ರಾಧಿಕಾರ ರವರ ಕಛೇರಿ, ಅರಣ್ಯ ಭವನ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-03.**

**73 ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ**
**ಅಧಿಸೂಚನೆ ಸಂಖ್ಯೆ: ಬಿ9/ನೇಮಕಾತಿ/ವಿವ-3/2017-18 ದಿನಾಂಕ: 24.03.2018**

# ಪ್ರಕಟಣೆ

ಅರಣ್ಯ ಇಲಾಖೆಯಲ್ಲಿ ಖಾಲಿ ಇರುವ 73 ವಲಯ ಅರಣ್ಯಾಧಿಕಾರಿ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳ ಅಧಿಸೂಚನೆ ಸಂಖ್ಯೆ: ಅಪಜೀ 366 ಅಪಸೇ 2010 ದಿನಾಂಕ: 06.09.2012 [Karnataka Forest Department Service (Recruitment) (Amendment) Rules 2012]ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

ಕರ್ನಾಟಕ ಅರಣ್ಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ವಲಯ ಅರಣ್ಯಾಧಿಕಾರಿ ಹುದ್ದೆಯ ನೇಮಕಾತಿ ಪ್ರಕ್ರಿಯೆಗಳನ್ನು ನಿಯಮಾನುಸಾರ ಪೂರ್ಣಗೊಳಿಸಿ, ಈ ಕಛೇರಿ ಪ್ರಕಟಣೆ ದಿನಾಂಕ: 06.07.2019ರಲ್ಲಿ 1:1 (ಹುದ್ದೆ:ಅಭ್ಯರ್ಥಿ) ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಈ ಸಂಬಂಧ, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು ಅರ್ಜಿ ಸಂಖ್ಯೆ: 6325/2019ರ ಆದೇಶ ದಿನಾಂಕ: 24.08.2022ರನ್ವಯ ಸರ್ಕಾರದ ಪತ್ರ ಸಂಖ್ಯೆ: ಎಫ್‌ಇಇ 124 ಎಫ್‌ಎನ್‌ಜಿ 2022 ದಿನಾಂಕ: 16.02.2024ರ ಅನುಮತಿಯಂತೆ, **ಶ್ರೀ ಕೇಶವಮೂರ್ತಿ ವಿ. ಸಿ. – ನೋಂದಣಿ ಸಂಖ್ಯೆ: 990938** ಅಭ್ಯರ್ಥಿಗೆ ವೃಂದ ಮತ್ತು ನೇಮಕಾತಿ ನಿಯಮಗಳು ಹಾಗೂ ನೇಮಕಾತಿ ಅಧಿಸೂಚನೆಯಲ್ಲಿನ ಷರತ್ತುಗಳಂತೆ **ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿದ ಮಾಹಿತಿಯಂತೆ ಎಲ್ಲಾ ಶೈಕ್ಷಣಿಕ ಮತ್ತು ಮೀಸಲಾತಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ದಿನಾಂಕ:04.03.2024ರಂದು ಬೆಳಿಗ್ಗೆ 11.00 ಗಂಟೆಗೆ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಸಿಬ್ಬಂದಿ ಮತ್ತು ನೇಮಕಾತಿ), 4ನೇ ಮಹಡಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು ರವರ ಸಮಕ್ಷಮ ಇಲಾಖಾ ವಶಕ್ಕೆ ನೀಡಲು ಸೂಚಿಸಿದೆ**.

**ಸೂಚನೆ:**

1. *ನಿಗದಿತ ದಿನಾಂಕ ಮತ್ತು ಸಮಯದಂದು ಮೂಲ ದಾಖಲೆಗಳನ್ನು ಇಲಾಖಾ ವಶಕ್ಕೆ ನೀಡಲು ತಪ್ಪಿದಲ್ಲಿ, ಅಭ್ಯರ್ಥಿಯ ಅಭ್ಯರ್ಥಿತ್ವ ಸ್ವಯಂ ಚಾಲಿತವಾಗಿ ರದ್ದಾಗುತ್ತದೆ ಹಾಗೂ ಈ ಕುರಿತು ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.*
2. *ಅರಣ್ಯ ಇಲಾಖೆಯ ಅಧಿಕೃತ ವೆಬ್‌ಸೈಟ್ https://aranya.gov.in/ ರಲ್ಲಿ ನೇಮಕಾತಿ (Recruitment) ಶೀರ್ಷಿಕೆಯಡಿ ಪ್ರಕಟಿಸಲಾಗುತ್ತಿರುವ ಮಾಹಿತಿಯನ್ನು ಅಭ್ಯರ್ಥಿಯು ಕಾಲ ಕಾಲಕ್ಕೆ ವೀಕ್ಷಿಸುವುದು. ಇದಕ್ಕಾಗಿ ಇಲಾಖೆಯು ಬೇರೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ.*

Signed by
Brijesh Kumar Dikshit
Date: 28-02-2024 10:37:07

ದಿನಾಂಕ: 27.02.2024

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು)
ಹಾಗೂ **ಆಯ್ಕೆ ಪ್ರಾಧಿಕಾರ**